# ಕರ್ನಾಟಕ ಸರ್ಕಾರ

ಸಂಖ್ಯೆ ಆಕುಕ 90 ಎಸಿಎಸ್ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ
ಬೆಂಗಳೂರು, ದಿನಾಂಕ: 02.04.2021

## ಆದೇಶ

ವಿಶ್ವ ಆರೋಗ್ಯ ಸಂಸ್ಥೆಯು ಈಗಾಗಲೇ ಸಾಂಕ್ರಾಮಿಕ ರೋಗವೆಂದು ಘೋಷಿಸಿರುವ ಕೋವಿಡ್ 19 ಸೋಂಕಿನ ಹರಡುವಿಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ (SDMA)ದ ಅಡಿಯಲ್ಲಿ ಪರಿಣಾಮಕಾರಿಯಾಗಿ ಕ್ರಮಗಳನ್ನು ರಾಜ್ಯದಲ್ಲಿ ಕೈಗೊಳ್ಳಲಾಗಿದೆ.

ಕರ್ನಾಟಕ ರಾಜ್ಯದ ಕೋವಿಡ್ 19 ಪರಿಸ್ಥಿತಿಯನ್ನು ಪರಿಶೀಲಿಸಿದಾಗ, ಕಳೆದ ಒಂದು ತಿಂಗಳ ಅವಧಿಯಲ್ಲಿ ಕೋವಿಡ್ 19 ಪ್ರಕರಣಗಳು ನಿರಂತುರವಾಗಿ ಏರಿಕೆಯಾಗುತ್ತಿರುವುದನ್ನು ಗಮನಿಸಲಾಗಿದೆ. ಮುಂದುವರೆದು, ಬೃಹತ್ ಸಂಖ್ಯೆಯಲ್ಲಿ ನಡೆಯುತ್ತಿರುವ ಸಾಮಾಜಿಕ, ಧಾರ್ಮಿಕ ಹಾಗೂ ಸಾರ್ವಜನಿಕ ಸಭೆ ಸಮಾರಂಭಗಳಾದ ಮದುವೆಗಳು ರಾಜಕೀಯ ರ್‍ಯಾಲಿಗಳ ಸಂದರ್ಭದಲ್ಲಿ, ಕೋವಿಡ್ ಮುನ್ನೆಚ್ಚರಿಕೆಯ ಸೂಕ್ತ ವರ್ತನೆಗಳು ಪಾಲನೆಯಾಗದ ಹಿನ್ನೆಲೆಯಲ್ಲಿ, ಈವರೆಗೆ ಕೋವಿಡ್ 19 ಸೋಂಕಿನ ಪ್ರಸರಣ ಸರಪಳಿಯನ್ನು ನಿಗ್ರಹಿಸುವಲ್ಲಿ ರಾಜ್ಯವು ಸಾಧಿಸಿರುವ ಗಮನಾರ್ಹ ಲಾಭಗಳನ್ನು ಉಳಿಸಿಕೊಳ್ಳಲು ಸಾಧ್ಯವಾಗುವುದಿಲ್ಲ.

ಪ್ರಸ್ತುತ, ಆದ್ದರಿಂದ, ವಿಪತ್ತು ನಿರ್ವಹಣಾ ಕಾಯ್ದೆ 2005 ರ ವಿಭಾಗ 22ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ, ಅಧ್ಯಕ್ಷರು, ರಾಜ್ಯ ಕಾರ್ಯಕಾರಿ ಸಮಿತಿ, ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರ ಸಾಮರ್ಥ್ಯದಿಂದ ಈ ಕೆಳಸಹಿದಾರನಾಗಿ, ಆಯುಕ್ತರು, ಬಿ.ಬಿ.ಎಂ.ಪಿ, ಜಿಲ್ಲಾಧಿಕಾರಿಗಳು ಹಾಗೂ ಸಂಬಂಧಪಟ್ಟ ಎಲ್ಲಾ ಪ್ರಾಧಿಕಾರಗಳಿಗೆ ಈ ಮೂಲಕ ನಿರ್ದೇಶಿಸುವುದೇನೆಂದರೆ, ಇನ್ನು ಮುಂದೆ ವಿವಿಧ ಸಾಮಾಜಿಕ/ಧಾರ್ಮಿಕ ಸಮಾರಂಭಗಳು ಹಾಗೂ ರಾಜಕೀಯ ಸಭೆಗಳು/ರ್‍ಯಾಲಿಗಳು ಇತ್ಯಾದಿಗಳ ಸಂದರ್ಭದಲ್ಲಿ ಸೇರಬಹುದಾದ ಸಾರ್ವಜನಿಕರ ಸಂಖ್ಯೆಯನ್ನು ಈ ಕೆಳಕಂಡಂತೆ ಮಿತಿಗೊಳಿಸುವುದು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ನಿರ್ಬಂಧಿಸಲಾಗಿರುವ ಆಚರಣೆ/ಸಮಾರಂಭ ಇತ್ಯಾದಿಗಳ ಸಂದರ್ಭದಲ್ಲಿ ಕೋವಿಡ್ ನಿಯಂತ್ರಣಕ್ಕೆ ಸೂಕ್ತ ವರ್ತನೆಗಳನ್ನು ಪಾಲಿಸುವಂತೆ ಖಚಿತಪಡಿಸಿಕೊಳ್ಳಲು ಆದೇಶಿಸಿದೆ.

ಮುಖ್ಯ ಆಯುಕ್ತರು, ಬಿಬಿಎಂಪಿ, ಎಲ್ಲಾ ಜಿಲ್ಲಾಧಿಕಾರಿಗಳು ಹಾಗೂ ಸಂಬಂಧಪಟ್ಟ ಎಲ್ಲಾ ಪ್ರಾಧಿಕಾರಗಳು ಈ ಆದೇಶವು ಕಟ್ಟುನಿಟ್ಟಾಗಿ ಪಾಲಿಸುವುದನ್ನು ಖಚಿತಪಡಿಸಿಕೊಳ್ಳುವುದು. ಮತ್ತು ಸದರಿ ಆದೇಶ ಬಗ್ಗೆ ಸೂಕ್ತ ಮಾಹಿತಿಯನ್ನು ಕ್ಷೇತ್ರ ಕಾರ್ಯಕಾರಿಗಳಿಗೆ (field functionaries) ನೀಡುವುದು, ಈ ನಿಯಮಗಳು ರೂಪ ಹಾಗೂ ವಿಷಯದಲ್ಲಿ ಯಥಾವತ್ತಾಗಿ ಅನುಪಾಲನೆಯಾಗುವುದನ್ನು ಖಚಿತಪಡಿಸಿಕೊಳ್ಳಲು ಸೂಚಿಸಿದೆ.

1. ವಿದ್ಯಾಗಮವೂ ಸೇರಿದಂತೆ 6 ರಿಂದ 9 ನೇ ತರಗತಿಗಳನ್ನು ಸ್ಥಗಿತಗೊಳಿಸಲಾಗಿದೆ. 10, 11 ಹಾಗೂ 12 ನೇ ತರಗತಿಗಳು ಪ್ರಸ್ತುತ ಇರುವಂತೆಯೇ ಮುಂದುವರೆಯುತ್ತವೆ. ಆದಾಗ್ಯೂ, ತರಗತಿಗಳಿಗೆ ವಿದ್ಯಾರ್ಥಿಗಳ ಹಾಜರಾತಿ ಕಡ್ಡಾಯವಾಗಿರುವುದಿಲ್ಲ.
2. ಉನ್ನತ ಶಿಕ್ಷಣ ಹಾಗೂ ವೃತ್ತಿಪರ ಕೋರ್ಸ್‌ಗಳ ತರಗತಿಗಳಲ್ಲಿ ಮಂಡಳಿಯ /ವಿಶ್ವವಿದ್ಯಾಲಯಗಳ ಪರೀಕ್ಷೆ ಬರೆಯುವ ಹಾಗೂ ವೈದ್ಯಕೀಯ ಶಿಕ್ಷಣದ ತರಗತಿಗಳನ್ನು ಹೊರತು ಪಡಿಸಿ, ಇತರ ಎಲ್ಲಾ ತರಗತಿಗಳನ್ನು ಸ್ಥಗಿತಗೊಳಿಸಲಾಗಿದೆ.

Scanned with CamScanner

೩. ವಸತಿ ಶಾಲೆಗಳು ಹಾಗೂ ಬೋರ್ಡಿಂಗ್ ಇರುವ ಶಾಲೆಗಳಲ್ಲಿ 10, 11 ಹಾಗೂ 12ನೇ ತರಗತಿಯ ಬೋರ್ಡ್ ಪರೀಕ್ಷೆ ಬರೆಯುವ ವಿದ್ಯಾರ್ಥಿಗಳು, ಉನ್ನತ ಶಿಕ್ಷಣ ಹಾಗೂ ವೃತ್ತಿಪರ ಕೋರ್ಸ್‌ಗಳ ವಿಶ್ವವಿದ್ಯಾಲಯಗಳ ಪರೀಕ್ಷೆ ಬರೆಯುವವರು ಮತ್ತು ವೈದ್ಯಕೀಯ ಶಿಕ್ಷಣದ ತರಗತಿಗಳನ್ನು ಹೊರತುಪಡಿಸಿ, ಇತರ ಎಲ್ಲಾ ತರಗತಿಗಳನ್ನು ಸ್ಥಗಿತಗೊಳಿಸಲಾಗಿದೆ.

೪. ಧಾರ್ಮಿಕ ಸ್ಥಳಗಳಲ್ಲಿ ವೈಯಕ್ತಿಕವಾಗಿ ಪ್ರಾರ್ಥನೆ ಮಾಡಲು ಅವಕಾಶವಿರುತ್ತದೆ, ಆದರೆ ಗುಂಪು ಸೇರುವ ಕಾರ್ಯಕ್ರಮಗಳಿಗೆ ಅವಕಾಶವಿರುವುದಿಲ್ಲ.

೫. ಅಪಾರ್ಟ್‌ಮೆಂಟ್ ಕಾಂಪ್ಲೆಕ್ಸ್‌ಗಳಲ್ಲಿ, ಸಾಮಾನ್ಯವಾಗಿ ನಿವಾಸಿಗಳು/ಜನರು ಸೇರುವ ಸ್ಥಳಗಳಾದ ಜಿಮ್, ಪಾರ್ಟಿ ಹಾಲ್‌ಗಳು/ಕ್ಲಬ್ ಹೌಸ್‌ಗಳು, ಈಜು ಕೊಳಗಳು, ಇತ್ಯಾದಿಗಳು ಮುಚ್ಚಲ್ಪಟ್ಟಿರುತ್ತವೆ.

6. ಉಳಿದಂತೆ ಎಲ್ಲಾ ಜಿಮ್‌ಗಳು ಹಾಗೂ ಈಜುಕೊಳಗಳು ಮುಚ್ಚಲ್ಪಟ್ಟಿರುತ್ತವೆ.

7. ಯಾವುದೇ ತರಹದ ರ್‍ಯಾಲಿಗಳು, ಮುಷ್ಕರ, ಧರಣಿ ಇತ್ಯಾದಿಗಳನ್ನು ನಿಷೇಧಿಸಲಾಗಿದೆ.

8. ಸಾರ್ವಜನಿಕ ಸಾರಿಗೆಗಳಲ್ಲಿ ಪ್ರಯಾಣಿಕರ ಸಂಖ್ಯೆಯು ನಿಗಧಿಪಡಿಸಿರುವ ಆಸನದ. ವ್ಯವಸ್ಥೆಯನ್ನು ಮೀರುವಂತಿಲ್ಲ.

9. ಕಛೇರಿಗಳು ಹಾಗೂ ಇತರ ಕೆಲಸ ನಿರ್ವಹಿಸುವ ಸ್ಥಳಗಳಲ್ಲಿ ಸಾಧ್ಯವಾದಷ್ಟು ಮನೆಯಿಂದಲೇ ಕೆಲಸ ನಿರ್ವಹಿಸುವ ಅಭ್ಯಾಸ / ವ್ಯವಸ್ಥೆಯನ್ನು ಪಾಲಿಸುವುದು.

10. ಬೆಂಗಳೂರು ನಗರ ಹಾಗೂ ಗ್ರಾಮಾಂತರ ಬಿ.ಬಿ.ಎಂ.ಪಿ ಸೇರಿದಂತೆ, ಮೈಸೂರು, ಕಲಬುರಗಿ, ದಕ್ಷಿಣ ಕನ್ನಡ, ಉಡುಪಿ, ಬೀದರ್ ಮತ್ತು ಧಾರವಾಡ ಜಿಲ್ಲೆಗಳ ಸಿನೆಮಾ ಹಾಲ್‌ಗಳಲ್ಲಿ ಪರ್ಯಾಯ ಆಸನಗಳಲ್ಲಿ ಕೂರುವಂತೆ/ಒಂದು ಬಿಟ್ಟೊಂದಾದ ಸೀಟ್‌ಗಳಲ್ಲಿ ಕುಳಿತುಕೊಳ್ಳುವಂತೆ ಗರಿಷ್ಠ 50% ವೀಕ್ಷಕರಿಗೆ ಮಾತ್ರ ಅವಕಾಶ ಕಲ್ಪಿಸುವುದು.

11. ಬೆಂಗಳೂರು ನಗರ ಹಾಗೂ ಗ್ರಾಮಾಂತರ ಬಿ.ಬಿ.ಎಂ.ಪಿ ಸೇರಿದಂತೆ, ಮೈಸೂರು, ಕಲಬುರಗಿ, ದಕ್ಷಿಣ ಕನ್ನಡ, ಉಡುಪಿ, ಬೀದರ್ ಮತ್ತು ಧಾರವಾಡ ಜಿಲ್ಲೆಗಳಲ್ಲಿ ಪಬ್, ಬಾರ್, ಕ್ಲಬ್, ರೆಸ್ಟೋರೆಂಟ್‌ಗಳಲ್ಲಿ ಗರಿಷ್ಠ ಗ್ರಾಹಕರ ಸಂಖ್ಯೆಯು ಶೇ.೫೦ರಷ್ಟು ಮೀರುವಂತಿಲ್ಲ.

12. ಕೋವಿಡ್ ಮುನ್ನೆಚ್ಚರಿಕೆಗಾಗಿ ಸೂಕ್ತ ವರ್ತನೆಗಳನ್ನು (Covid Appropriate Behavior - CAB) ಕಡ್ಡಾಯವಾಗಿ ಮುಖಗವಸು, ದೈಹಿಕ ಅಂತರ ಪಾಲನೆ, ಹ್ಯಾಂಡ್ ಸ್ಯಾನಿಟೈಸರ್, ಹ್ಯಾಂಡ್ ವಾಷ್‌ಗಳ ಬಳಕೆಯನ್ನು ಜಾರಿಗೊಳಿಸುವುದು. ಈ ನಿಯಮಗಳನ್ನು ಉಲ್ಲಂಘಿಸಿದಲ್ಲಿ ಸದರಿ ಪಬ್, ಬಾರ್, ಕ್ಲಬ್, ರೆಸ್ಟೋರೆಂಟ್‌ಗಳನ್ನು ಕೋವಿಡ್ ಸಾಂಕ್ರಾಮಿಕ ಪರಿಸ್ಥಿತಿ ಕೊನೆಗೊಳ್ಳುವವರೆಗೂ ಮುಚ್ಚಲಾಗುವುದು.

13. ಶಾಪಿಂಗ್ ಮಾಲ್‌ಗಳು, ಮುಚ್ಚಿದ ಪ್ರದೇಶಗಳಲ್ಲಿರುವ ಮಾರ್ಕೆಟ್‌ಗಳು ಹಾಗೂ ಡಿಪಾರ್ಟ್‌ಮೆಂಟಲ್ ಸ್ಟೋರ್‌ಗಳಲ್ಲಿ ಶಿಷ್ಟಾಚಾರದನ್ವಯ ಕೋವಿಡ್ ಮುನ್ನೆಚ್ಚರಿಕೆಗಾಗಿ ಸೂಕ್ತ ವರ್ತನೆಗಳನ್ನು (Covid Appropriate Behavior - CAB) ಅಂದರೆ, ಕಡ್ಡಾಯವಾಗಿ ಮುಖಗವಸು, ದೈಹಿಕ ಅಂತರ ಪಾಲನೆ, ಹ್ಯಾಂಡ್ ಸ್ಯಾನಿಟೈಸರ್, ಹ್ಯಾಂಡ್ ವಾಷ್‌ಗಳ ಬಳಕೆಯನ್ನು ಜಾರಿಗೊಳಿಸುವುದು. ಈ ನಿಯಮಗಳನ್ನು ಉಲ್ಲಂಘಿಸಿದಲ್ಲಿ ಮೇಲಿನ ಸ್ಥಳಗಳನ್ನು ಕೋವಿಡ್ ಸಾಂಕ್ರಾಮಿಕ ಪರಿಸ್ಥಿತಿ ಕೊನೆಗೊಳ್ಳುವವರೆಗೂ ಮುಚ್ಚಲಾಗುವುದು.

Scanned with CamScanner

14. ಸಾರ್ವಜನಿಕ ಸ್ಥಳಗಳಲ್ಲಿ ಧಾರ್ಮಿಕ ಆಚರಣೆಗಳು ಹಾಗೂ ಜಾತ್ರೆ ಮಹೋತ್ಸವಗಳು, ಮೇಳಗಳು, ಗುಂಪು ಸೇರುವುದರ ನಿಷೇಧ ಮುಂದುವರೆಯುತ್ತದೆ.

15. ವಿವಿಧ ಸಭೆ/ಸಮಾರಂಭ ಆಚರಣೆಗಳಲ್ಲಿ ಭಾಗವಹಿಸಲು ಅವಕಾಶ ನೀಡಬಹುದಾದ ಸಾರ್ವಜನಿಕರ ಸಂಖ್ಯೆಯನ್ನು ದಿನಾಂಕ 12.03.2021ರಲ್ಲಿರುವ ಸುತ್ತೋಲೆಯಂತೆ ಮುಂದುವರಿಸಿದೆ.

16. ಸಾರ್ವಜನಿಕ ಸ್ಥಳಗಳಲ್ಲಿ ಮಾಸ್ಕ್ ಧರಿಸುವುದು ಹಾಗೂ ದೈಹಿಕ ಅಂತರವನ್ನು ಕಾಪಾಡಿಕೊಳ್ಳುವುದು, ಇವುಗಳಿಗೆ ಸಂಬಂಧಪಟ್ಟಂತೆ ಈಗಾಗಲೇ ಜಾರಿಯಲ್ಲಿರುವ ನಿಯಮ/ಆದೇಶಗಳನ್ನು ಪೊಲೀಸ್ ಇಲಾಖೆ ಹಾಗೂ ಸ್ಥಳೀಯ ಆಡಳಿತಗಳು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸುವುದು.

ಈ ಮೇಲೆ ತಿಳಿಸಿದ ನಿಯಮಗಳನ್ನು ಯಾವುದೇ ವ್ಯಕ್ತಿ/ ವ್ಯಕ್ತಿಗಳು ಉಲ್ಲಂಘಿಸಿದ ಪಕ್ಷದಲ್ಲಿ, ಅಂತಹ ವ್ಯಕ್ತಿ/ ವ್ಯಕ್ತಿಗಳ ವಿರುದ್ಧ ವಿಪತ್ತು ನಿರ್ವಹಣಾ ಕಾಯ್ದೆ, 2005 ರ ವಿಭಾಗ 51 ರಿಂದ 60 ರ ಅನ್ವಯ, ಐ ಪಿ ಸಿ ಸೆಕ್ಷನ್ 188 ರಂತೆ ಹಾಗೂ ಕರ್ನಾಟಕ ಸಾಂಕ್ರಾಮಿಕ ರೋಗಗಳ ಕಾಯ್ದೆ, 2020ರ ವಿಭಾಗ 4,5 ಮತ್ತು 10 ರಂತೆ ಕ್ರಮಗಳನ್ನು ಜರುಗಿಸಲಾಗುವುದು.

ಈ ಮೇಲೆ ತಿಳಿಸಿರುವ ನಿಯಮಗಳು ಹಾಗೂ ನಿರ್ಬಂಧಗಳು 20.04.2021ರವರೆಗೆ ಚಾಲ್ತಿಯಲ್ಲಿರುತ್ತವೆ.

(ಪಿ ರವಿ ಕುಮಾರ್)
ಮುಖ್ಯ ಕಾರ್ಯದರ್ಶಿ ಹಾಗೂ
ಅಧ್ಯಕ್ಷರು, ರಾಜ್ಯ ಕಾರ್ಯಕಾರಿ ಸಮಿತಿ,
ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ
ಕರ್ನಾಟಕ ಸರ್ಕಾರ

ಇವರಿಗೆ ,
ಸಂಕಲನಕಾರರು, ಕರ್ನಾಟಕ ಗೆಜೆಟ್, ಬೆಂಗಳೂರು, ಇವರಿಗೆ ವಿಶೇಷ ಗೆಜೆಟ್‌ನಲ್ಲಿ ತುರ್ತಾಗಿ ಪ್ರಕಟಿಸಲು.

ಪ್ರತಿಯನ್ನು ಮಾಹಿತಿಗಾಗಿ, ಕ್ರೋಢೀಕರಣ ಹಾಗೂ ಪ್ರಸಾರಕ್ಕಾಗಿ,

1. ಅಪರ ಮುಖ್ಯ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು.
2. ಸರ್ಕಾರದಪ್ರಧಾನ ಕಾರ್ಯದರ್ಶಿಗಳು, ವೈದ್ಯಕೀಯ ಶಿಕ್ಷಣ ಇಲಾಖೆ.ಬೆಂಗಳೂರು.
3. ಸರ್ಕಾರದಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ.ಬೆಂಗಳೂರು.
4. ಸರ್ಕಾರದಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕಹಾಗೂಪ್ರೌಢಶಿಕ್ಷಣ ಇಲಾಖೆ.ಬೆಂಗಳೂರು.
5. ಸರ್ಕಾರದಪ್ರಧಾನಕಾರ್ಯದರ್ಶಿಗಳು,ಸಮಾಜ ಕಲ್ಯಾಣ ಇಲಾಖೆ.ಬೆಂಗಳೂರು.
6. ಆಯುಕ್ತರು,ಧಾರ್ಮಿಕ ದತ್ತಿ ಇಲಾಖೆ.ಬೆಂಗಳೂರು.
7. ರಾಜ್ಯದ ಎಲ್ಲಾ ಪ್ರಾದೇಶಿಕ ಆಯುಕ್ತರು.
8. ಆಯುಕ್ತರು, ಬಿ ಬಿ ಎಂ ಪಿ, ಬೆಂಗಳೂರು
9. ಪೊಲೀಸ್ ಆಯುಕ್ತರು, ಬೆಂಗಳೂರು.
10. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
11. ಅಭಿಯಾನ ನಿರ್ದೇಶಕರು, ಎನ್ ಹೆಚ್ ಎಂ, ಬೆಂಗಳೂರು.

Scanned with CamScanner

12. ವಿಶೇಷ ಆಯುಕ್ತರು, ಬಿ ಬಿ ಎಂ ಪಿ, ಬೆಂಗಳೂರು.
13. ಜಿಲ್ಲಾಧಿಕಾರಿಗಳು, ಎಲ್ಲಾ ಜಿಲ್ಲೆಗಳು
14. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
15. ನಿರ್ದೇಶಕರು, ವೈದ್ಯಕೀಯ ಶಿಕ್ಷಣ, ಬೆಂಗಳೂರು.
16. ಎಲ್ಲಾ ವಿಭಾಗೀಯ / ಸಹ ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
17. ಮುಖ್ಯ ಆರೋಗ್ಯಾಧಿಕಾರಿಗಳು, ಬಿ ಬಿ ಎಂ ಪಿ
18. ಜಿಲ್ಲಾ ಆರೋಗ್ಯಾಧಿಕಾರಿಗಳು/ ಜಿಲ್ಲಾ ಸರ್ಜನರು/ಆಡಳಿತ ವೈದ್ಯಾಧಿಕಾರಿಗಳು/ ತಾಲ್ಲೂಕು ವೈದ್ಯಾಧಿಕಾರಿಗಳು ಹಾಗೂ ಎಲ್ಲಾ ಸಾರ್ವಜನಿಕ ಆಸ್ಪತ್ರೆಗಳ ವೈದ್ಯಕೀಯ ಅಧೀಕ್ಷಕರು.

Scanned with CamScanner